I/227638/2022

# ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ (ಆಸು) 2 ಇವಿತ 2021

ಕರ್ನಾಟಕ ಸರ್ಕಾರ ಸಚಿವಾಲಯ,
ಕೊಠಡಿ ಸಂಖ್ಯೆ: 605, 1ನೇ ಹಂತ, 6ನೇ ಮಹಡಿ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:02-03-2022.

## ಸುತ್ತೋಲೆ

ವಿಷಯ: ಸರ್ಕಾರಿ ನೌಕರರು ಪಾಸ್‌ಪೋರ್ಟ್ ನಿರಾಕ್ಷೇಪಣಾ ಪತ್ರ ನೀಡುವ ಅಧಿಕಾರವನ್ನು ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಪ್ರತ್ಯಾಯೋಜಿಸುವ ಬಗ್ಗೆ.

ಉಲ್ಲೇಖ: ದಿನಾಂಕ:28-10-2021 ರಂದು ಜರುಗಿದ ರಾಜ್ಯ ಮಟ್ಟದ ಜಂಟಿ ಸಮಾಲೋಚನಾ ಸಮಿತಿ ಸಭೆಯ ನಡವಳಿ.

********

ಸರ್ಕಾರದ 'ಬಿ', 'ಸಿ' ಮತ್ತು 'ಡಿ' ವೃಂದದ ಅಧಿಕಾರಿ / ನೌಕರರು ಪಾಸ್‌ಪೋರ್ಟ್ ಪಡೆಯಲು ಅಗತ್ಯವಿರುವ ನಿರಾಕ್ಷೇಪಣಾ ಪತ್ರವನ್ನು ನೀಡಲು; ಕೆಳಕಂಡ ಅಂಶಗಳನ್ನು ಪರಿಶೀಲಿಸಿ, ಕ್ರಮ ಕೈಗೊಳ್ಳಬೇಕೆಂಬ ಸೂಚನೆಯೊಂದಿಗೆ; ಆಯಾ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಅಧಿಕಾರವನ್ನು ಪ್ರತ್ಯಾಯೋಜಿಸಲಾಗಿದೆ. ಅರ್ಜಿದಾರರಿಗೆ ನಿರಾಕ್ಷೇಪಣಾ ಪತ್ರ ನೀಡುವ ಮುನ್ನ;

1. ಅರ್ಜಿದಾರ ನೌಕರ/ ಅಧಿಕಾರಿ ವಿರುದ್ಧ ಕಠಿಣ ದಂಡನೆ ವಿಧಿಸಬಹುದಾದ ಶಿಸ್ತಿನ ಪ್ರಕರಣಗಳು ಬಾಕಿ ಇದ್ದಲ್ಲಿ ಅಥವಾ ಹೂಡಲು ಉದ್ದೇಶಿಸಿದ್ದಲ್ಲಿ;
2. ಲೋಕಾಯುಕ್ತ ಪ್ರಕರಣ/ ಎಸಿಬಿ ಪ್ರಕರಣ/ Vigilance ಪ್ರಕರಣಗಳು ಬಾಕಿ ಇದ್ದಲ್ಲಿ ಅಥವಾ ಹೂಡಲು ಉದ್ದೇಶಿಸಿದ್ದಲ್ಲಿ;
3. ಗುರುತರ ಕ್ರಿಮಿನಲ್ (Cognizable offense) / ನ್ಯಾಯಾಂಗ ವಿಚಾರಣೆ ಬಾಕಿ ಇದ್ದಲ್ಲಿ ಅಥವಾ ಹೂಡಲು ಉದ್ದೇಶಿಸಿದ್ದಲ್ಲಿ;
4. ಭಾರತದ ಸಾರ್ವಭೌಮತ್ವ, ಭದ್ರತೆಗೆ ಧಕ್ಕೆ ತರುವಂತಹ ಪ್ರಕರಣಗಳಲ್ಲಿ ಭಾಗಿಯಾಗಿದ್ದಾರೆಂದು ಆರೋಪಗಳು ಸಂಬಂಧಿಸಿದ ಸಂಸ್ಥೆ / ಏಜೆನ್ಸಿಗಳಲ್ಲಿ ದಾಖಲಾಗಿದ್ದಲ್ಲಿ / ವಿಚಾರಣೆ ಪ್ರಗತಿ ಇದ್ದಲ್ಲಿ, **ನಿರಾಕ್ಷೇಪಣಾ ಪತ್ರವನ್ನು ನೀಡಬಾರದು.**

ಉಳಿದಂತೆ, ಇತರೆ ಗ್ರೂಪ್ "ಎ" ವೃಂದದ ಅಧಿಕಾರಿಗಳು ಪಾಸ್‌ಪೋರ್ಟ್ ಪಡೆಯಲು ಅಗತ್ಯವಿರುವ ನಿರಾಕ್ಷೇಪಣಾ ಪತ್ರವನ್ನು ಸರ್ಕಾರದ ಹಂತದಲ್ಲಿ ಪಡೆಯುವಂತೆ ಸೂಚಿಸಲಾಗಿದೆ.

(ಜ್ಯೋತಿ ಆರ್. ಜೆ.)
ಸರ್ಕಾರದ ಉಪ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಆಡಳಿತ ಸುಧಾರಣೆ)

**ಗೆ,**

1. ಸರ್ಕಾರದ ಎಲ್ಲಾ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳು.

..2...

I/227638/2022



2. ಎಲ್ಲಾ ಇಲಾಖಾ ಮುಖ್ಯಸ್ಥರಿಗೆ.
3. ಎಲ್ಲಾ ಜಿಲ್ಲಾಧಿಕಾರಿಗಳಿಗೆ / ಎಲ್ಲಾ ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿಗಳಿಗೆ /ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ.
4. ಸಚಿವಾಲಯದ ಎಲ್ಲಾ ವಿಶೇಷ/ಅಪರ/ ಜಂಟಿ/ಉಪ/ಅಧೀನ ಕಾರ್ಯದರ್ಶಿ.
5. ಮಾನ್ಯ ಮುಖ್ಯಮಂತ್ರಿಗಳ ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
6. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
9. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
10. ಕಛೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.